ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:2119/2018

ಚಾಸಾ:7 ಪ್ರಾಸಾ:7

ದಿನಾಂಕ: 17.09.2024

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ನಿತ್ಯಾನಂದ ಶೆಟ್ಟಿ |
| ತಂದೆಯ ಹೆಸರು | : | ಕುಶಲ ಶೆಟ್ಟಿ |
| ವಯಸ್ಸು | : | 53 ವರ್ಷ |
| ಉದ್ಯೋಗ | : | ಶಿಕ್ಷಕ |
| ವಾಸ ಸ್ಥಳ | : | ಹಳ್ನಾಡು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ಆರೋಪಿಯ ಪರಿಚಯವಿಲ್ಲ. 2018ರಲ್ಲಿ ನಾನು ನನ್ನ ಸ್ನೇಹಿತರೊಂದಿಗೆ ಸಿದ್ದಾಪುರದಿಂದ ಕಂಡ್ಲೂರಿಗೆ ಕಾರಿನಲ್ಲಿ ಬರುತ್ತಿದ್ದಾಗ ನೆಲ್ಲಿಕಟ್ಟೆಯಲ್ಲಿರುವ ಕಾರ್ಖಾನೆ ಬಳಿ ನಾವು ಬರುವಾಗ ಅಪಘಾತವಾಗಿ ಜನರೆಲ್ಲಾ ಸೇರಿದ್ದರು. ನಾನು ಮತ್ತು ಚಾಸಾ-8ರವರು ಸೇರಿ ನೋಡಿರುತ್ತೇವೆ. ಅಲ್ಲಿನ ಸ್ಥಳೀಯರೆಲ್ಲಾ ಸೇರಿ ಗಾಯಗೊಂಡವರನ್ನು ಆಸ್ಪತ್ರೆಗೆ ದಾಖಲಿಸಿರುತ್ತಾರೆ. ಅಪಘಾತವು ಬಸ್ಸು ಮತ್ತು ಕಾರಿನ ನಡುವೆ ಆಗಿದ್ದು, ಅದರಿಂದ ಇಬ್ಬರು ವ್ಯಕ್ತಿಗಳು ಮೃತಪಟ್ಟಿರುತ್ತಾರೆ. ಈ ಪ್ರಕರಣದ ಬಗ್ಗೆ ನಾನು ಯಾವುದೇ ಹೇಳಿಕೆಯನ್ನು ಪೊಲೀಸರಿಗೆ ನೀಡಿಲ್ಲ. ಸಾಕ್ಷಿ ನಿಪಿ-2 ಮತ್ತು 3ನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ಭಾಗಶಃ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>**

ದಿಃ 15-07-2018 ರಂದು ಆರೋಪಿಯು ತನ್ನ ಬಾಬ್ತು ದುರ್ಗಾಂಬಾ ಬಸ್ಸನ್ನು ಅತೀ ವೇಗ ಹಾಗೂ ಅಜಾಗುರೂಕತೆಯಿಂದ ಚಲಾಯಿಸಿಕೊಂಡು ಬರುತ್ತಿದ್ದು ಎದುರುಗಡೆ ಯಿಂದ ಬರುತ್ತಿದ್ದ ಸ್ಯಾಂಟ್ರೋ ಕಾರಿಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ವ್ಯಕ್ತಿಗಳು ಮೃತಪಟ್ಟಿದ್ದು ನಾನು ಸದ್ರಿ ಅಪಘಾತವನ್ನು ಪ್ರತ್ಯಕ್ಷವಾಗಿ ಕಂಡು ಅದರ ಬಗ್ಗೆ ದಿಃ 17-07-2018 ರಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-11 ಎಂದು ಗುರುತಿಸಲಾಯಿತು. ಸದ್ರಿ ಅಪಘಾತಕ್ಕೆ ಕಾರಣವಾದ ಬಸ್ಸು ನಿಪಿ-4 ಮತ್ತು 5ರಲ್ಲಿ ಕಂಡು ಬರುತ್ತದೆ ಎಂದರೆ ಸರಿಯಲ್ಲ. ಸದ್ರಿ ಘಟನೆಯ ಬಗ್ಗೆ ನನಗೆ ಮಾಹಿತಿ ಇದ್ದರೂ ಆರೋಪಿ ಪರಿಚಯಸ್ಥರಾದ ಕಾರಣ ಪೊಲೀಸರಿಗೆ ಹೇಳಿಕೆ ನೀಡಿದ್ದರೂ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**